# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 06 ಎಸ್‌ಟಿಎಸ್ 2013

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 07-06-2013.

## ಸುತ್ತೋಲೆ

ವಿಷಯ: ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳಿಗೆ ಶೈಕ್ಷಣಿಕ ವರ್ಷದ ಅಂಕಿ ಅಂಶಗಳ ಮಾಹಿತಿಯನ್ನು ಒದಗಿಸುವ ಬಗ್ಗೆ.

***********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆಯಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಶೈಕ್ಷಣಿಕ ವರ್ಷದ ಅಂಕಿ ಅಂಶಗಳ ಮಾಹಿತಿಯನ್ನು ಕೋರಿರುತ್ತಾರೆ. ಆದಕಾರಣ ತಮ್ಮ ಜಿಲ್ಲೆಗೆ ಸಂಬಂಧಿಸಿದಂತೆ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಕೋರುತ್ತಿರುವ ಪ್ರತಿ ಶೈಕ್ಷಣಿಕ ವರ್ಷದ ಅಂಕಿಅಂಶಗಳ ಮಾಹಿತಿಯನ್ನು ಸಂಬಂಧಪಟ್ಟ ಪ್ರಿನ್ಸಿಪಾಲರು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳಿಗೆ ಒದಗಿಸಲು ಸೂಚಿಸಲಾಗಿದೆ. ಹಾಗೂ ಮಾಹಿತಿಯ ಪ್ರತಿಯನ್ನು ಈ ಕಛೇರಿಗೆ ಕಳುಹಿಸಿಕೊಡಲು ತಿಳಿಸಲಾಗಿದೆ.

ನಿರ್ದೇಶಕರು.

ಇವರಿಗೆ,

1. ಪ್ರಿನ್ಸಿಪಾಲರು, ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನ ರಹಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಿಗೆ.
2. ಪ್ರಿನ್ಸಿಪಾಲರು, ಎಲ್ಲಾ ಸರ್ಕಾರಿ/ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳು.
3. ಪ್ರಿನ್ಸಿಪಾಲರು, ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಚಿತ್ರಕಲಾ ಶಾಲೆಗಳು.
4. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಹೆಚ್ಚುವರಿ ಪ್ರತಿಗಳು.

Sh otr ltr

ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/04/ಎಸ್‌ಟಿಎಸ್/ 2016

ನಿರ್ದೇಶಕರ ಕಚೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ,
ಬೆಂಗಳೂರು-560 001,
ದಿನಾಂಕ: 15.9.2016

ಇವರಿಗೆ

**ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು,**

__________________________

__________________________

__________________________

ಮಾನ್ಯರೆ,

ವಿಷಯ: 2015-16ನೇ ಸಾಲಿನ ಜಿಲ್ಲಾ ಅಂಕಿ ಅಂಶಗಳ ನೋಟಕ್ಕೆ ಮಾಹಿತಿ ಕಳುಹಿಸುವ ಬಗ್ಗೆ.

ಉಲ್ಲೇಖ: ಸುತ್ತೋಲೆ ಸಂಖ್ಯೆ: ಡಿಟಿಇ/06/ಎಸ್‌ಟಿಎಸ್/2013, ದಿ:7.06.2013

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳಿಗೆ ಬೇಕಾಗಿರುವ ಅಂಕಿ-ಅಂಶಗಳನ್ನು ಸಂಬಂಧಿಸಿದ ಜಿಲ್ಲೆಗಳ ತಾಂತ್ರಿಕ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ನೀಡಲು ಈ ಪತ್ರಕ್ಕೆ ಲಗತ್ತಿಸಿದ ಸತ್ತೋಲೆಯಲ್ಲಿ ಸೂಚಿಸಲಾಗಿದೆ. ಅದರಂತೆ ಸಂಬಂಧಿಸಿದ ಮಾಹಿತಿಯನ್ನು ಸಂಬಂಧಿಸಿದ ಜಿಲ್ಲೆಗಳ ತಾಂತ್ರಿಕ ಸಂಸ್ಥೆಗಳಿಂದಲೇ ನೇರವಾಗಿ ಪಡೆಯಲು ಈ ಮೂಲಕ ತಿಳಿಸಲಾಗಿದೆ. ಜಿಲ್ಲಾವಾರು ಹಾಗೂ ತಾಲ್ಲೂಕುವಾರು ತಾಂತ್ರಿಕ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಅಂಕಿ ಅಂಶಗಳನ್ನು ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ಕೇಂದ್ರ ಕಛೇರಿಗೂ ಕಳುಹಿಸಿಕೊಡಲಾಗಿರುತ್ತದೆ ಎಂಬ ಅಂಶವನ್ನು ಗಮನಕ್ಕೆ ತರುತ್ತಾ ಹಾಗೂ ಸುತ್ತೋಲೆಯ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ತಮ್ಮ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.

ತಮ್ಮ ನಂಬುಗೆಯ

ನಿರ್ದೇಶಕರು

15.9.16

**ಪ್ರತಿ:**

1. ಪ್ರಾಚಾರ್ಯರು, ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್‌ಗಳಿಗೆ, ಎಲ್ಲಾ ಸರ್ಕಾರಿ/ಖಾಸಗಿ ಕಿರಿಯ ತಾಂತ್ರಿಕ ಶಾಲೆಗಳು, ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಚಿತ್ರಕಲಾ ಶಾಲೆಗಳು, ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಇ-ಆಡಳಿತ ಕೋಶದ ಸೂಕ್ತ ಕ್ರಮಕ್ಕಾಗಿ
3. ಕಛೇರಿ ಕಡತ ಪ್ರತಿ